21-3-2022
UDAYAVANI - MANIPAL

## ಡಾ| ಟಿಎಂಎ ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ

# 'ಕೋವಿಡ್ ನಿರ್ವಹಣೆಯಲ್ಲಿ ಕೆಎಂಸಿ ಸಹಕಾರ ಸ್ಮರಣೀಯ'

ಮಣಿಪಾಲ, ಮಾ. 20: ಕಸ್ತೂರ್ಬಾ ಆಸ್ಪತ್ರೆ ರಾಜ್ಯದಲ್ಲಿ ಮಾತ್ರವಲ್ಲದೆ ಜಾಗತಿಕವಾಗಿಯೂ ಕೈಗೆಟಕುವ ದರದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಮೂಲಕ ಶ್ಲಾಘನೀಯ ಕಾರ್ಯ ಮಾಡುತ್ತಿದೆ. ಕೋವಿಡ್ ನಿರ್ವಹಣೆಯಲ್ಲಿ ಜಿಲ್ಲಾಡಳಿತಕ್ಕೆ ಮಾಹೆಯ ಸಹಕಾರ ಸ್ಮರಣೀಯ ಎಂದು ಜಿಲ್ಲಾಧಿಕಾರಿ ಕೂರ್ಮಾ ರಾವ್ ಎಂ. ಹೇಳಿದರು.

ಮಣಿಪಾಲದ ಹೊಟೇಲ್ ಫಾರ್ಚೂನ್ ಇನ್ ವ್ಯಾಲಿಯಲ್ಲಿ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯ 60ನೇ ವಾರ್ಷಿಕೋತ್ಸವದ ಅಂಗವಾಗಿ ಶನಿವಾರ ಜಿಲ್ಲೆಯ ಹಿರಿಯ ನಿವೃತ್ತ ವೈದ್ಯರಿಗೆ ಡಾ| ಟಿಎಂಎ ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಮಾಹೆ ಸಹ ಕುಲಾಧಿಪತಿ ಡಾ| ಎಚ್.ಎಸ್. ಬಲ್ಲಾಳ್ ಅಧ್ಯಕ್ಷತೆ ವಹಿಸಿ, ದಿ| ಡಾ| ಟಿ.ಎಂ.ಎ. ಪೈ ಅವರು 1962ರಲ್ಲಿ ಕಸ್ತೂರ್ಬಾ ಆಸ್ಪತ್ರೆ ಸ್ಥಾಪಿಸಿದ್ದು, ಇದು ರಾಜ್ಯ ಹಾಗೂ ನೆರೆ ರಾಜ್ಯಗಳ ಜನರ ಆರೋಗ್ಯ ಅಗತ್ಯಗಳನ್ನು ಪೂರೈಸುತ್ತದೆ ಎಂದರು.

### ಪ್ರಿವಿಲೇಜ್ ಕಾರ್ಡ್

ಕುಲಪತಿ ಲೆ| ಜ| ಡಾ| ಎಂಡಿ ವೆಂಕಟೇಶ್ ಅವರು ಮಾತನಾಡಿ, ನಮ್ಮ ಆಸ್ಪತ್ರೆಯನ್ನು ಬೆಂಬಲಿಸುವ ವೈದ್ಯರ ಸೇವೆಗಾಗಿ ಕೃತಜ್ಞತಾ ಭಾವವಾಗಿ ಕಸ್ತೂರ್ಬಾ ಆಸ್ಪತ್ರೆಯು ಒಂದು ಸಣ್ಣ ಉಡುಗೊರೆಯಾಗಿ ಪ್ರಿವಿಲೇಜ್ ಕಾರ್ಡ್ ಬಿಡುಗಡೆ ಮಾಡಿದೆ. ಈ ಕಾರ್ಡ್‌ನೊಂದಿಗೆ ಆಸ್ಪತ್ರೆಗೆ ಭೇಟಿ ನೀಡಿದಾಗ ಕಾರ್ಡ್‌ದಾರರು ಮತ್ತು ಅವರ ಕುಟುಂಬದವರು ರಿಯಾಯಿತಿ ಪಡೆಯಲಿದ್ದಾರೆ ಎಂದರು.

ಸಹ ಕುಲಪತಿ ಡಾ| ಪಿ.ಎಲ್.ಎನ್. ಜಿ. ರಾವ್ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಶಿಬಿರಗಳನ್ನು ರಚಿಸಿ ತೃತೀಯ ಹಂತದ ಚಿಕಿತ್ಸೆ ನೀಡುವ ಮೂಲಕ ಆರೋಗ್ಯ ಸೇವೆಯನ್ನು ಜನಸಾಮಾನ್ಯರಿಗೆ ತಲುಪಿಸುವುದು ಮಣಿಪಾಲ ಸಂಸ್ಥೆಯ ಉದ್ದೇಶವಾಗಿದೆ ಎಂದರು.




ಉಡುಪಿ: ಜಿಲ್ಲೆಯ ಹಿರಿಯ ನಿವೃತ್ತ ವೈದ್ಯರಿಗೆ ಡಾ| ಟಿಎಂಎ ಪೈ ಆರೋಗ್ಯ ಸೇವಕ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

### ಆರೋಗ್ಯ ಸೇವಕ ಪ್ರಶಸ್ತಿ

ಕಾರ್ಕಳದ ಡಾ| ಶೈಲಾ ಎಸ್. ನಾಯಕ್ ಮತ್ತು ಡಾ| ಆರ್. ಗಿರೀಶ್ ಶೆಣೈ, ಉಡುಪಿಯ ಡಾ| ಕೆ. ಕೃಷ್ಣದೇವ ಕಲ್ಕೂರ, ಮಂದಾರ್ತಿಯ ಡಾ| ಎನ್. ಸುರೇಶ್ಚಂದ್ರ ಶೆಟ್ಟಿ, ಕುಂದಾಪುರದ ಡಾ| ಅಂಪಾರು ವಸಂತ ಕುಮಾರ್ ಶೆಟ್ಟಿ ಅವರಿಗೆ ಡಾ| ಟಿ.ಎಂ.ಎ. ಪೈ ಆರೋಗ್ಯ ಸೇವಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಪ್ರಿವಿಲೇಜ್ ಕಾರ್ಡ್ ಬಿಡುಗಡೆ ಮಾಡಲಾಯಿತು. ಸಿಒಒ ಸಿ.ಜಿ. ಮುತ್ತಣ್ಣ ಅವರು ಕಾರ್ಡ್‌ನ ಪರಿಚಯ ಮಾಡಿದರು. ಕೆಎಂಸಿ ಡೀನ್ ಡಾ| ಶರತ್ ಕೆ. ರಾವ್ ಸ್ವಾಗತಿಸಿ, ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ವಂದಿಸಿದರು.

ವಿಜಯವಾಣಿ

ಸೋಮವಾರ 21 ಮಾರ್ಚ್ 2022
21 MARCH 2022

# ಕೋವಿಡ್ ನಿರ್ವಹಣೆಯಲ್ಲಿ ಕೆಎಂಸಿ ಸಹಕಾರ ಸ್ಮರಣೀಯ

## ಜಿಲ್ಲಾಧಿಕಾರಿ ಕೂರ್ಮಾ ರಾವ್ ಹೇಳಿಕೆ । ಡಾ.ಟಿಎಂಎ ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ

■ ವಿಜಯವಾಣಿ ಸುದ್ದಿಜಾಲ ಉಡುಪಿ

ಮಾಹೆ ಅಂತಾರಾಷ್ಟ್ರೀಯ ಮಟ್ಟದ ಸಂಸ್ಥೆಯಾಗಿದ್ದರೂ ಸ್ಥಳೀಯ ವಿಷಯಗಳಿಗೆ ಆದ್ಯತೆ ನೀಡಿ ಕಾರ್ಯನಿರ್ವಹಿಸುತ್ತಿದೆ. ಕೋವಿಡ್ ನಿರ್ವಹಣೆಯಲ್ಲಿ ಜಿಲ್ಲಾಡಳಿತಕ್ಕೆ ಕೆಎಂಸಿ ಸಹಕಾರ ಸ್ಮರಣೀಯ ಎಂದು ಜಿಲ್ಲಾಧಿಕಾರಿ ಕೂರ್ಮಾ ರಾವ್ ಎಂ. ಹೇಳಿದರು.

ಶನಿವಾರ ಮಣಿಪಾಲದ ಹೋಟೆಲ್ ಫಾರ್ಚೂನ್ ಇನ್ ವ್ಯಾಲಿಯಲ್ಲಿ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ 60ನೇ ವಾರ್ಷಿಕೋತ್ಸವ ಅಂಗವಾಗಿ ಜಿಲ್ಲೆಯ ಹಿರಿಯ ನಿವೃತ್ತ ವೈದ್ಯರಿಗೆ ಡಾ.ಟಿ ಎಂ ಎ ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಕೋವಿಡ್ ಸಂದರ್ಭದಲ್ಲಿ 9 ಜಿಲ್ಲೆಯ ಜನರಿಗೆ ಉತ್ತಮ ಚಿಕಿತ್ಸೆಯನ್ನು ಕೆಎಂಸಿಯಲ್ಲಿ ನೀಡಲಾಗಿದೆ. ಜಿಲ್ಲಾಮಟ್ಟದ ತಜ್ಞರ ಸಮಿತಿಯಲ್ಲಿ ಕೆಎಂಸಿ ವೈದ್ಯರಿಂದ ಉತ್ತಮ ಸಲಹೆ ಸೂಚನೆಗಳು ಲಭಿಸಿವೆ ಎಂದರು.

ಮಣಿಪಾಲ ಮಾಹೆ ಸಹ ಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಅಧ್ಯಕ್ಷತೆ ವಹಿಸಿದ್ದರು. ಕುಲಪತಿ ಡಾ.ಎಂ.ಡಿ. ವೆಂಕಟೇಶ್ ಮತ್ತು ಸಹ ಕುಲಪತಿ ಡಾ.ಪಿ.ಎಲ್.ಎನ್.ಜಿ.ರಾವ್ ಅತಿಥಿಗಳಾಗಿದ್ದರು. ಕೆಎಂಸಿ ಡೀನ್ ಡಾ.ಶರತ್ ಕೆ. ರಾವ್, ಸಿಒಒ ಸಿ.ಜಿ. ಮುತ್ತಣ್ಣ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಉಪಸ್ಥಿತರಿದ್ದರು.

ಕಾರ್ಕಳದ ಡಾ.ಶೈಲಾ ಎಸ್. ನಾಯಕ್ ಮತ್ತು ಡಾ. ಆರ್. ಗಿರೀಶ್ ಶೆಣೈ, ಉಡುಪಿಯ ಡಾ.ಕೆ.ಕೃಷ್ಣದೇವ ಕಲ್ಕೂರ, ಮಂದಾರ್ತಿಯ ಡಾ.ಎನ್.ಸುರೇಶ್ಚಂದ್ರ ಶೆಟ್ಟಿ ಮತ್ತು ಕುಂದಾಪುರದ ಡಾ.ಅಂಪಾರು ವಸಂತಕುಮಾರ್ ಶೆಟ್ಟಿ ಅವರಿಗೆ ಡಾ.ಟಿ.ಎಂ. ಎ. ಪೈ ಆರೋಗ್ಯಸೇವಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸ್ಥಳೀಯ ವೈದ್ಯರಿಗೆ ವಿಶೇಷ ಸೌಲಭ್ಯವುಳ್ಳ ವಿಶೇಷಾಧಿಕಾರ ಕಾರ್ಡ್ (ಪ್ರಿವಿಲೇಜ್ ಕಾರ್ಡ್) ಬಿಡುಗಡೆ ಮಾಡಲಾಯಿತು.




**ಕಸ್ತೂರ್ಬಾ ಆಸ್ಪತ್ರೆ 60ನೆ ವಾರ್ಷಿಕೋತ್ಸವ ಅಂಗವಾಗಿ ಕಾರ್ಕಳದ ಡಾ.ಶೈಲಾ ಎಸ್. ನಾಯಕ್ ಮತ್ತು ಡಾ. ಆರ್. ಗಿರೀಶ್ ಶೆಣೈ, ಉಡುಪಿಯ ಡಾ.ಕೆ.ಕೃಷ್ಣದೇವ ಕಲ್ಕೂರ, ಮಂದಾರ್ತಿಯ ಡಾ.ಎನ್.ಸುರೇಶ್ಚಂದ್ರ ಶೆಟ್ಟಿ ಮತ್ತು ಕುಂದಾಪುರದ ಡಾ.ಅಂಪಾರು ವಸಂತಕುಮಾರ್ ಶೆಟ್ಟಿ ಅವರಿಗೆ ಡಾ.ಟಿ.ಎಂ.ಎ. ಪೈ ಆರೋಗ್ಯಸೇವಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.**

ಕನ್ನಡಪ್ರಭ
ಸೋಮವಾರ 21.3.2022

# ಮಣಿಪಾಲ: ಕಸ್ತೂರ್ಬಾ ಆಸ್ಪತ್ರೆಯ 60ನೇ ವರ್ಷಾಚರಣೆ ಸಂಭ್ರಮ




ಹಿರಿಯ ನಿವೃತ್ತ ವೈದ್ಯರಿಗೆ ಡಾ. ಟಿ.ಎಂ.ಎ.ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನಿಸಲಾಯಿತು.

• ಕನ್ನಡಪ್ರಭ ವಾರ್ತೆ ಮಣಿಪಾಲ

ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯು ಸಮಾಜಕ್ಕೆ ಆರೋಗ್ಯ ಸೇವೆಯನ್ನು ಒದಗಿಸುವಲ್ಲಿ 60 ವರ್ಷಗಳನ್ನು ಪೂರೈಸುತ್ತಿರುವ ಪ್ರಯುಕ್ತ, ಜಿಲ್ಲೆಯ ಹಿರಿಯ ನಿವೃತ್ತ ವೈದ್ಯರಿಗೆ ಡಾ. ಟಿ.ಎಂ.ಎ.ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ ಮತ್ತು ವೈದ್ಯರ ಪ್ರಿವಿಲೇಜ್ ಕಾಡ್‌ನ ಬಿಡುಗಡೆ ಕಾರ್ಯಕ್ರಮ ಶನಿವಾರ ಆಯೋಜಿಸಲಾಗಿತ್ತು.

ಜಿಲ್ಲಾಧಿಕಾರಿ ಕೂರ್ಮಾ ರಾವ್ ಮತ್ತು ಮಾಹೆಯ ಸಹಕುಲಾಧಿಪತಿ ಡಾ. ಎಚ್.ಎಸ್. ಬಲ್ಲಾಳ್ ಅವರು ಜಂಟಿಯಾಗಿ ಪ್ರಿವಿಲೇಜ್ ಕಾರ್ಡನ್ನು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೂರ್ಮಾ ರಾವ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕರ್ನಾಟಕದಲ್ಲಿ ಮಾತ್ರವಲ್ಲದೆ ನೆರೆಹೊರೆಯ ರಾಜ್ಯಗಳಿಗೆ ಜಾಗತಿಕವಾಗಿಯೂ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುತ್ತಿದೆ ಎಂದು ಶ್ಲಾಘಿಸಿದರು. ಕೋವಿಡ್ ಸಾಂಕ್ರಾಮಿಕ ಸಂದರ್ಭದಲ್ಲಿ ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತರ ಸೇವೆಗೆ ಅವರು ಧನ್ಯವಾದ ಹೇಳಿದರು.

ನಂತರ ಕಾರ್ಕಳದಿಂದ ಡಾ. ಶೈಲಾ ಎಸ್. ನಾಯಕ್ ಹಾಗೂ ಡಾ. ಗಿರೀಶ್ ಶೆಣೈ, ಉಡುಪಿಯಿಂದ ಡಾ. ಕೃಷ್ಣದೇವ ಕಲ್ಕೂರ, ಮಂದಾರ್ತಿಯಿಂದ ಡಾ. ಎನ್. ಸುರೇಶ್ಚಂದ್ರ ಶೆಟ್ಟಿ, ಕುಂದಾಪುರದಿಂದ ಡಾ. ಅಂಪಾರು ವಸಂತಕುಮಾರ್ ಶೆಟ್ಟಿ ಅವರಿಗೆ ಡಾ. ಟಿ. ಎಂ.ಎ. ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಹಕುಲಪತಿ ಡಾ. ಎಚ್.ಎಸ್. ಬಲ್ಲಾಳ್ ಅಧ್ಯಕ್ಷತೆ ವಹಿಸಿದ್ದರು. ಮಾಹೆಯ ಉಪಕುಲಪತಿಗಳಾದ ಲೆ.ಜ.(ಡಾ) ಎಂ.ಡಿ. ವೆಂಕಟೇಶ್, ಸಹಉಪಕುಲಪತಿ ಡಾ. ಪಿ. ಎಲ್.ಎನ್.ಜಿ. ರಾವ್, ಆಸ್ಪತ್ರೆಯ ಪ್ರಾದೇಶಿಕ ಕಾರ್ಯ ನಿರ್ವಹಣಾಧಿಕಾರಿ ಸಿ.ಜಿ. ಮುತ್ತನ ಉಪಸ್ಥಿತರಿದ್ದರು. ಡೀನ್ ಡಾ. ಶರತ್ ಕುಮಾರ್ ಸ್ವಾಗತಿಸಿ, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ವಂದಿಸಿದರು.

ಪ್ರಜಾವಾಣಿ
ಸೋಮವಾರ • ಮಾರ್ಚ್ 21, 2022




ಮಣಿಪಾಲದ ಕಸ್ತೂರಬಾ ಆಸ್ಪತ್ರೆಯು 60 ವರ್ಷಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಮಣಿಪಾಲದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಡುಪಿ ಜಿಲ್ಲೆಯ ನಿವೃತ್ತ ವೈದ್ಯರಾದ ಉಡುಪಿಯ ಡಾ.ಕೃಷ್ಣದೇವ ಕಲ್ಕೂರ, ಮಂದಾರ್ತಿಯ ಡಾ.ಎನ್.ಸುರೇಶ್ಚಂದ್ರ ಶೆಟ್ಟಿ, ಕುಂದಾಪುರದ ಡಾ.ಅಂಪಾರ ವಸಂತಕುಮಾರ್ ಶೆಟ್ಟಿ, ಕಾರ್ಕಳದಡಾ.ಶೈಲಾ ಎಸ್. ನಾಯಕ್, ಡಾ.ಗಿರೀಶ್ ಶೆಣೈ, ಅವರಿಗೆ ಡಾ.ಟಿ.ಎಂ.ಎ.ಪೈ ಆರೋಗ್ಯ ಸೇವಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಜಿಲ್ಲಾಧಿಕಾರಿ ಎಂ.ಕೂರ್ಮರಾವ್ ಹಾಗೂ ಮಾಹೆ ಸಹ ಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಇದ್ದರು

### ಡಾ.ಟಿಎಂಎ ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ

# ಮಣಿಪಾಲ: ಕೆಎಂಸಿಗೆ 60ರ ಸಂಭ್ರಮ

ಪ್ರಜಾವಾಣಿ ವಾರ್ತೆ

**ಮುಖ್ಯಾಂಶಗಳು**

- ಕೋವಿಡ್ ನಿಯಂತ್ರಣಕ್ಕೆ ಕೆಎಂಸಿ ಸಹಕಾರ: ಜಿಲ್ಲಾಧಿಕಾರಿ
- 1962ರಲ್ಲಿ ಕಸ್ತೂರಬಾ ಆಸ್ಪತ್ರೆ ಸ್ಥಾಪನೆ: ಆರೋಗ್ಯ ಕ್ಷೇತ್ರದಲ್ಲಿ ಗಣನೀಯ ಸೇವೆ
- ಕರಾವಳಿ ಹಾಗೂ ನೆರೆಯ ಜಿಲ್ಲೆಗಳ ರೋಗಿಗಳಿಗೆ ನಿರಂತರ ಸೇವೆ

ಉಡುಪಿ: ಮಣಿಪಾಲದ ಕಸ್ತೂರಬಾ ಆಸ್ಪತ್ರೆಯು 60 ವರ್ಷಗಳನ್ನು ಪೂರೈಸಿದ್ದು, ಭಾನುವಾರ ಜಿಲ್ಲೆಯ ನಿವೃತ್ತ ವೈದ್ಯರಿಗೆ ಡಾ.ಟಿ.ಎಂ.ಎ ಪೈ ಆರೋಗ್ಯ ಸೇವಕ ಪ್ರಶಸ್ತಿ ವಿತರಣಾ ಸಮಾರಂಭ ಹಾಗೂ ವೈದ್ಯರ ಪ್ರಿವಿಲೇಜ್ ಕಾರ್ಡ್‌ನ ಉದ್ಘಾಟನಾ ಕಾರ್ಯಕ್ರಮ ನಡೆಯಿತು.

ಜಿಲ್ಲಾಧಿಕಾರಿ ಎಂ.ಕೂರ್ಮರಾವ್ ಹಾಗೂ ಮಾಹೆ ಸಹ ಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಪ್ರಿವಿಲೇಜ್ ಕಾರ್ಡ್ ಬಿಡುಗಡೆ ಮಾಡಿದರು.

ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಎಂ. ಕೂರ್ಮಾರಾವ್, 'ಕಸ್ತೂರಬಾ ಆಸ್ಪತ್ರೆ ಕೈಗೆಟುಕುವ ದರದಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುತ್ತದೆ. ರಾಜ್ಯ ಹಾಗೂ ನೆರೆಯ ಪ್ರದೇಶಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುತ್ತಿರುವುದು ಶ್ಲಾಘನೀಯ' ಎಂದರು.

'ಸಾಂಕ್ರಾಮಿಕ ರೋಗದ ಸಂದರ್ಭದಲ್ಲಿ ಆರೋಗ್ಯ ಕಾರ್ಯಕರ್ತರ ಶ್ರಮ ದೊಡ್ಡದು. ಜಿಲ್ಲಾಡಳಿತದ ಪ್ರಯತ್ನಗಳಿಗೆ ಮಾಹೆ ಆಡಳಿತ ಮಂಡಳಿ ಬೆನ್ನೆಲುಬಾಗಿ ನಿಂತಿದೆ' ಎಂದು ಮೆಚ್ಚುಗೆ ಸೂಚಿಸಿದರು.

ಕಾರ್ಕಳದಿಂದ ಡಾ.ಶೈಲಾ ಎಸ್. ನಾಯಕ್, ಡಾ.ಗಿರೀಶ್ ಶೆಣೈ, ಉಡುಪಿಯಿಂದ ಡಾ.ಕೃಷ್ಣದೇವ ಕಲ್ಕೂರ, ಮಂದಾರ್ತಿಯಿಂದ ಡಾ.ಎನ್. ಸುರೇಶ್ಚಂದ್ರ ಶೆಟ್ಟಿ, ಕುಂದಾಪುರದಿಂದ ಡಾ.ಅಂಪಾರ ವಸಂತಕುಮಾರ್ ಶೆಟ್ಟಿ ಅವರಿಗೆ ಡಾ.ಟಿ.ಎಂ.ಎ.ಪೈ ಆರೋಗ್ಯ ಸೇವಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮಾಹೆ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ.ವೆಂಕಟೇಶ್ ಮಾತನಾಡಿ, 'ಸಂಸ್ಥಾಪಕ ಡಿ.ಡಾ. ಟಿಎಂಎ ಪೈ ಆಶಯಗಳನ್ನು ಸಾಧಿಸುವ ನಿಟ್ಟಿನಲ್ಲಿ 60 ವರ್ಷಗಳ ಕಾಲ ಸಮಾಜಕ್ಕೆ ಅತ್ಯುತ್ತಮ ಆರೋಗ್ಯ ಸೇವೆ ನೀಡಲಾಗಿದೆ' ಎಂದರು.

ಈ ಸುದೀರ್ಘ ಪ್ರಯಾಣದಲ್ಲಿ ಭಾಗಿಯಾದ ಎಲ್ಲರಿಗೂ ಧನ್ಯವಾದ. ಆಸ್ಪತ್ರೆಯನ್ನು ಬೆಂಬಲಿಸುವ ವೈದ್ಯರ ಸೇವೆಗೆ ಕೃತಜ್ಞತಾಭಾವವಾಗಿ ಕಸ್ತೂರಬಾ ಆಸ್ಪತ್ರೆಯು ಸಣ್ಣ ಉಡುಗೊರೆಯಾಗಿ ಪ್ರಿವಿಲೇಜ್ ಕಾರ್ಡ್ ಬಿಡುಗಡೆ ಮಾಡಿದೆ. ಇದರ ಪ್ರಯೋಜನ ಪಡೆದವರು ಹಾಗೂ ಕುಟುಂಬದವರು ಆಸ್ಪತ್ರೆಯಲ್ಲಿ ರಿಯಾಯಿತಿ ಪಡೆಯಬಹುದು ಎಂದರು.

ಮಾಹೆ ಸಹ ಉಪ ಕುಲಪತಿ ಡಾ. ಪಿಎಲ್‌ಎನ್‌ಜಿ ರಾವ್ ಮಾತನಾಡಿ, 'ಗ್ರಾಮೀಣ ಭಾಗದಲ್ಲಿ ಶಿಬಿರಗಳನ್ನು ಆಯೋಜಿಸುವ ಮೂಲಕ ಜನಸಾಮಾನ್ಯರಿಗೂ ಆರೋಗ್ಯ ಸೇವೆ ತಲುಪಿಸುವುದು ಮಣಿಪಾಲ ಸಂಸ್ಥೆಯ ಉದ್ದೇಶವಾಗಿದೆ' ಎಂದರು.

ಮಾಹೆ ಸಹ ಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಮಾತನಾಡಿ, ದಿ.ಡಾ. ಟಿ.ಎಂ.ಎ.ಪೈ ದಾರ್ಶನಿಕ ವ್ಯಕ್ತಿಯಾಗಿದ್ದು, 1962ರಲ್ಲಿ ಕಸ್ತೂರಬಾ ಆಸ್ಪತ್ರೆ ಸ್ಥಾಪಿಸಿದರು. ಕರ್ನಾಟಕ ಹಾಗೂ ನೆರೆಯ ರಾಜ್ಯಗಳ ಜನರಿಗೆ ಆಸ್ಪತ್ರೆಯು ಆರೋಗ್ಯ ಸೇವೆಗಳನ್ನು ನೀಡುತ್ತಿದೆ. ದಶಕಗಳಿಂದ ಗುಣಮಟ್ಟದ ಆರೈಕೆ ನೀಡುತ್ತಿದೆ' ಎಂದರು.

ಪ್ರಾದೇಶಿಕ ಕಾರ್ಯ ನಿರ್ವಹಣಾಧಿಕಾರಿ ಸಿ.ಜಿ.ಮುತ್ತನ್ನ ಪ್ರಿವಿಲೇಜ್ ಕಾರ್ಡ್ ಕುರಿತು ಮಾಹಿತಿ ನೀಡಿದರು.

ಕೆಎಂಸಿ ಡೀನ್ ಡಾ.ಶರತ್ ಕುಮಾರ್ ಸ್ವಾಗತಿಸಿದರು. ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ವಂದಿಸಿದರು.

ವಿಜಯ ಕರ್ನಾಟಕ

ಸೋಮವಾರ,21 ಮಾರ್ಚ್ 2022,
ಮಂಗಳೂರು

# ಡಾ. ಟಿಎಂಎ ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ, ಪ್ರಿವಿಲೇಜ್ ಕಾರ್ಡ್ ಬಿಡುಗಡೆ

## ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯ 60ನೇ ವಾರ್ಷಿಕೋತ್ಸವ ಆಚರಣೆ

■ **ವಿಕ ಸುದ್ದಿಲೋಕ** ಉಡುಪಿ



ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯು ಆರೋಗ್ಯ ಸೇವೆಯನ್ನು ಒದಗಿಸುವಲ್ಲಿ 60 ವರ್ಷಗಳನ್ನು ಪೂರೈಸಿದ್ದು, ಈ ಪ್ರಯುಕ್ತ ಮಣಿಪಾಲ ಹೋಟೆಲ್ ಫಾರ್ಚೂನ್ ಇನ್ ವ್ಯಾಲಿವ್ಯೂನಲ್ಲಿ ಉಡುಪಿ ಜಿಲ್ಲೆಯ ಹಿರಿಯ ನಿವೃತ್ತ ವೈದ್ಯರಿಗೆ ಡಾ.ಟಿಎಂಎ ಪೈ ಆರೋಗ್ಯ ಸೇವಕ ಪ್ರಶಸ್ತಿ ಹಾಗೂ ವೈದ್ಯರ ಪ್ರಿವಿಲೇಜ್ ಕಾರ್ಡ್‌ನ ಉದ್ಘಾಟನೆ ಸಮಾರಂಭ ನಡೆಯಿತು.

ಜಿಲ್ಲಾಧಿಕಾರಿ ಕೂರ್ಮಾ ರಾವ್ ಎಂ. ಪ್ರಿವಿಲೇಜ್ ಕಾರ್ಡ್ ಬಿಡುಗಡೆಗೊಳಿಸಿ ಮಾತನಾಡಿ, ಕಸ್ತೂರ್ಬಾ ಆಸ್ಪತ್ರೆಯು ಕರ್ನಾಟಕ ಮಾತ್ರವಲ್ಲದೆ ಜಾಗತಿಕವಾಗಿಯೂ ಕೈಗೆಟುಕುವ ದರದಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುತ್ತಿದೆ. ಆಸ್ಪತ್ರೆಯ ಕರ್ನಾಟಕ ಹಾಗೂ ನೆರೆಯ ಪ್ರದೇಶಗಳಿಗೆ ಗುಣಮಟ್ಟದ ಸೇವೆಗಳನ್ನು ಒದಗಿಸುವ ಪ್ರಯತ್ನ ಶ್ಲಾಘನೀಯ ಎಂದರು.

ಮಾಹೆಯ ಉಪಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ. ವೆಂಕಟೇಶ್ ಮಾತನಾಡಿ, ಕಸ್ತೂರ್ಬಾ ಆಸ್ಪತ್ರೆಯನ್ನು ಬೆಂಬಲಿಸುವ ವೈದ್ಯರ ಸೇವೆಗಾಗಿ ಕೃತಜ್ಞತಾಭಾವವಾಗಿ ಕಸ್ತೂರ್ಬಾ ಆಸ್ಪತ್ರೆಯು ಪ್ರಿವಿಲೇಜ್ ಕಾರ್ಡ್‌ನ್ನು ಬಿಡುಗಡೆ ಮಾಡಿದೆ. ಈ ಪ್ರಿವಿಲೇಜ್ ಕಾರ್ಡ್‌ನೊಂದಿಗೆ ಆಸ್ಪತ್ರೆಗೆ ಭೇಟಿ ನೀಡಿದಾಗ ಕಾರ್ಡ್‌ದಾರರು ಮತ್ತು ಅವರ ಕುಟುಂಬವು ರಿಯಾಯಿತಿ ಸೌಲಭ್ಯ ಪಡೆಯಬಹುದು ಎಂದರು.

ಮಾಹೆ ವೈದ್ಯಕೀಯ ಮತ್ತು ದಂತ ವಿಜ್ಞಾನದ ಸಹ-ಉಪ ಕುಲಪತಿ ಡಾ.ಪಿ.ಎಲ್.ಎನ್.ಜಿ. ರಾವ್ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಶಿಬಿರಗಳನ್ನು ರಚಿಸಿ ತೃತೀಯ ಹಂತದ ಚಿಕಿತ್ಸೆ ನೀಡುವ ಮೂಲಕ ಆರೋಗ್ಯ ಸೇವೆಯನ್ನು ಜನಸಾಮಾನ್ಯರಿಗೆ ತಲುಪಿಸುವುದು ಮಣಿಪಾಲ ಸಂಸ್ಥೆಯ ಉದ್ದೇಶವಾಗಿದೆ ಎಂದರು.

ಮಾಹೆಯ ಸಹ ಕುಲಪತಿ ಡಾ.ಎಚ್. ಎಸ್. ಬಲ್ಲಾಳ್ ಅಧ್ಯಕ್ಷತೆ ವಹಿಸಿದ್ದರು. ಉಡುಪಿ ಜಿಲ್ಲೆಯ ಐವರು ಹಿರಿಯ ಸಲಹೆಗಾರರಿಗೆ ಡಾ.ಟಿ.ಎಂ.ಎ ಪೈ ಆರೋಗ್ಯ ಸೇವಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಕಳದಿಂದ ಡಾ. ಶೈಲಾ ಎಸ್. ನಾಯಕ್, ಡಾ.ಗಿರೀಶ್ ಶೆಣೈ, ಉಡುಪಿಯಿಂದ ಡಾ.ಕೃಷ್ಣದೇವ ಕಲ್ಕೂರ, ಮಂದಾರ್ತಿಯ ಡಾ.ಎನ್. ಸುರೇಶ್ಚಂದ್ರ ಶೆಟ್ಟಿ, ಕುಂದಾಪುರದ ಡಾ.ಅಂಪಾರ ವಸಂತಕುಮಾರ್ ಶೆಟ್ಟಿ ಪ್ರಶಸ್ತಿ ಸ್ವೀಕರಿಸಿದರು.

ಪ್ರಾದೇಶಿಕ ಕಾರ್ಯ ನಿರ್ವಹಣಾಧಿಕಾರಿ ಸಿ.ಜಿ.ಮುತ್ತನ ಅವರು ಪ್ರಿವಿಲೇಜ್ ಕಾರ್ಡ್‌ನ ಅವಲೋಕನವನ್ನು ನೀಡಿದರು. ಕೆಎಂಸಿ ಡೀನ್ ಡಾ. ಶರತ್ ಕುಮಾರ್ ಸ್ವಾಗತಿಸಿದರು. ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ವಂದಿಸಿದರು.

ಜನದನಿಯ ಸಾರಥಿ
ವಾರ್ತಾ ಭಾರತಿ

# ನಿವೃತ್ತ ವೈದ್ಯರಿಗೆ ಡಾ.ಟಿ.ಎಂ.ಎ.ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ

ವಾರ್ತಾ ಭಾರತಿ : 20 Mar, 2022




ಮಣಿಪಾಲ : ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯು ಆರೋಗ್ಯ ಸೇವೆ ಒದಗಿಸುವಲ್ಲಿ ೬೦ ವರ್ಷ ಪೂರೈಸಿರುವ ಪ್ರಯುಕ್ತ ಉಡುಪಿ ಜಿಲ್ಲೆಯ ಹಿರಿಯ ನಿವೃತ್ತ ವೈದ್ಯರಿಗೆ ಡಾ.ಟಿ.ಎಂ.ಎ.ಪೈ ಆರೋಗ್ಯ ಸೇವಕ ಪ್ರಶಸ್ತಿ ಪ್ರದಾನ ಮತ್ತು ವೈದ್ಯರ ಪ್ರಿವಿಲೇಜ್ ಕಾರ್ಡ್ ಉದ್ಘಾಟನಾ ಸಮಾರಂಭವನ್ನು ಮಣಿಪಾಲದ ಹೋಟೆಲ್ ವ್ಯಾಲಿ ವ್ಯೆನಲ್ಲಿ ಶನಿವಾರ ಆಯೋಜಿಸಲಾಗಿತ್ತು.

ಉಡುಪಿ ಜಿಲ್ಲಾಧಿಕಾರಿ ಕೂರ್ಮಾ ರಾವ್ ಮತ್ತು ಮಾಹೆ ಸಹಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಜಂಟಿಯಾಗಿ ಪ್ರಿವಿಲೇಜ್ ಕಾರ್ಡ್ ಬಿಡುಗಡೆ ಮಾಡಿದರು. ಹಿರಿಯ

**Other Links**:

- **Udupi9:** https://udupi9.com/?p=5229
- **Namma Udupi Bulletin:** https://nammaudupibulletin.com/suddigalu/pradeshika/60th-year-celebration-of-kmc-manipal/
- **Daijiworld:** https://daijiworld.com/news/newsDisplay?newsID=939005
- **Karavali Express:** https://karavalixpress.com/news/kmc-23/
- **Vartha Bharati:** http://www.varthabharati.in/article/2022_03_20/328755
- **Udupixpress:** https://udupixpress.com/dr-t-m-pai-health-care-award-presented-to-retired-doctors-in-the-city/
- **The Canara Post:** https://bit.ly/3Im9sXD
- **Suddikirana:** https://suddikirana.com/sangati/kmc-manipal-senior-doctors-honoured-previlage-card-inaugrated/